ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014–15 ದಿನಾಂಕ: 13–7–2015

# ಪತ್ರಿಕಾ ಪ್ರಕಟಣೆ

## ಅಲೆಮಾರಿ ಸಮುದಾಯಗಳ ಅಭಿವೃದ್ಧಿಗೆ ಸೌಲಭ್ಯ

ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)

ಕರ್ನಾಟಕ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ಮಂಡಳಿ ಇವರು ಒದಗಿಸಿದ ಅನುದಾನದಲ್ಲಿ ಅಲೆಮಾರಿ/ಅರೆ ಅಲೆಮಾರಿ ಜನಾಂಗಗಳಿಗೆ ಸೇರಿದವರಿಗೆ ಅಭಿವೃದ್ಧಿಗೆ ಸೌಲಭ್ಯ ಒದಗಿಸಲು ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮವು ಅನುಷ್ಠಾನಗೊಳಿಸುತ್ತಿರುವ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಅರಿವು–ಶೈಕ್ಷಣಿಕ ಸಾಲ ಯೋಜನೆ, ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಯೋಜನೆ ಕಾರ್ಯಕ್ರಮಗಳಲ್ಲಿ 2015–16 ನೇ ಸಾಲಿಗೆ ಅರ್ಹರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಈ ಯೋಜನೆಗಳಲ್ಲಿ ಶೇ 50 ರಷ್ಟು ಗೊಲ್ಲ ಸಮುದಾಯಕ್ಕೆ ಹಾಗೂ ಶೇ 50 ರಷ್ಟು ಇತರೆ ಅಲೆಮಾರಿ/ಅರೆ ಅಲೆಮಾರಿ ಜನಾಂಗದವರಿಗೆ ಸೌಲಭ್ಯ ಒದಗಿಸಲಾಗುವುದು. ಬೈರಾಗಿ (ಬಾವ), ಬಾಲ ಸಂತೋಷಿ–ಜೋಷಿ, ಬಾಜಿಗರ್, ಭರಡಿ, ಬುಡಬುಡಕಿ–ಜೋಶಿ–ಗೋಂಧಳಿ, ಚಾರ, ಚಿತ್ರಕತಿ–ಜೋಶಿ, ಧೋಲಿ, ದವೇರಿ, ದೊಂಬರಿ ಘಿಸಾರಿ, ಗರುಡಿ, ಗೋಪಾಲ್, ಗೋಂಧಳಿ, ಹೆಳವ, ಜೋಗಿ, ಕೆಲ್‌ಕರಿ, ಕೋಲ್‌ಹಾಟಿ, ನಂದಿವಾಲ–ಜೋಶಿ–ಗೋಧಳಿ, ಘುಲ್–ಮಲ್ಲಿ, ನಾಥಪಂಥಿ–ಸೌರಿ–ಗೋಸಾವಿ, ನಿಲ್‌ಶಿಕಾರಿ, ಪಂಗುಲ್, ಜೋಡಿ (ಸಾದ ಜೋಶಿ), ಸನ್‌ಸಿಯ, ಸರನಿಯ, ತಿರುಮಲಿ ವೈಡು, ವಾಸುದೇವ್, ವಡಿ, ವಗ್ರಿ, ವಿರ್, ಬಜನಿಯ, ಶಿಕ್ಕಲ್‌ಗಾರ, ಗೊಲ್ಲ, ಕಿಳ್ಳಕ್ವಾತಸ್, ಸರೋಡಿ, ದುರ್ಗಾಮುರ್ಗ (ಬುರ್‌ಬುರ್‌ಚ), ಹಾವಗಾರ್ (ಹಾವಾಡಿಗರ್), ಪಿಚಗುಂಟಲ, ಮಸನಿಯ ಯೋಗಿ, (ಬಸ್ತರ್) ಬುಂಡ ಬೆಸ್ತ, ಕಟಬು, ಕಾಶಿಕಪ್‌ಡಿ, ದೊಂಬಿದಾಸ ಮತ್ತು ಬೈಲ್‌ಪತ್ತಾರ್ ಈ ಎಲ್ಲ ಸಮುದಾಯಕ್ಕೆ ಸೇರಿದವರು ಅರ್ಹರು.

ಮೇಲ್ಕಂಡ ಯೋಜನೆಗಳಲ್ಲಿ ಸೌಲಭ್ಯ ಪಡೆಯಲು ಇಚ್ಚಿಸುವ ಅಲೆಮಾರಿ/ಅರೆ ಅಲೆಮಾರಿ ಜನಾಂಗದವರು ವಾಸಿಸುತ್ತಿರುವ ಆಯಾ ಜಿಲ್ಲೆಯ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಚೇರಿಯಲ್ಲಿ ಅಥವಾ ಆಯಾ ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವಿಸ್ತರಣಾಧಿಕಾರಿಗಳ ಕಚೇರಿಯಲ್ಲಿ ನಿಗದಿತ ಅರ್ಜಿ ನಮೂನೆಗಳನ್ನು ಪಡೆಯಲು ಹಾಗೂ ಭರ್ತಿಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಸಲ್ಲಿಸಲು ಜುಲೈ 30 ಕೊನೆಯ ದಿನಾಂಕವಾಗಿದ್ದು, ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಹಿಂದಿನ ಪ್ರಕಟಣೆ ಮೇರೆಗೆ ಅರ್ಜಿ ಸಲ್ಲಿಸಿರುವ ಮೇಲ್ಕಂಡ ಅಲೆಮಾರಿ/ಅರೆ ಅಲೆಮಾರಿ ಜನಾಂಗದವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯವಿರುವುದಿಲ್ಲ. ಈಗಾಗಲೇ ಸಲ್ಲಿಸಿರುವ ಅರ್ಜಿಯನ್ನು ಪರಿಗಣಿಸಲಾಗುವುದು.

ಯೋಜನೆಗಳ ಹೆಚ್ಚಿನ ಮಾಹಿತಿಗೆ ನಿಗಮದ ಜಿಲ್ಲಾ ವ್ಯವಸ್ಥಾಪಕ ಕಚೇರಿ, ಸಹಾಯಕ ಪ್ರಧಾನ ವ್ಯವಸ್ಥಾಪಕರ ಆಯಾ ವಿಭಾಗೀಯ ಕಚೇರಿ ಹಾಗೂ ನಿಗಮದ ಕೇಂದ್ರ ಕಚೇರಿಯಲ್ಲಿ ಸಂಪರ್ಕಿಸಬಹುದು ಮತ್ತು ನಿಗಮದ ವೆಬ್‌ಸೈಟ್ **www.karnataka.gov.in/dbcdc** ನೋಡಬಹುದು.
ಬಾಬು:ಜಿಪಿಆರ್.

## ಕೆ.ಓ.ಎಸ್. ಪೂರಕ ಪರೀಕ್ಷೆ ಫಲಿತಾಂಶ

**ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)**

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು 2015 ರ ಜೂನ್ ಮಾಹೆಯಲ್ಲಿ ನಡೆಸಿದ ಕರ್ನಾಟಕ ಮುಕ್ತ ಶಾಲೆ – ಕೆ.ಓ.ಎಸ್. ಪೂರಕ ಪರೀಕ್ಷಾ ಫಲಿತಾಂಶವನ್ನು ಜುಲೈ 14 ರಂದು ಮಧ್ಯಾಹ್ನ 2–00 ಗಂಟೆಗೆ ರಾಜ್ಯ ಎಲ್ಲಾ ಕಲಿಕಾ ಕೇಂದ್ರಗಳಲ್ಲಿ ಪ್ರಕಟಿಸಲು ಕರ್ನಾಟಕ ಮುಕ್ತ ಶಾಲೆ – ಕೆ.ಒ.ಎಸ್. ಕಲಿಕಾ ಕೇಂದ್ರಗಳ ಸಮನ್ವಯಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.
ಬಾಬು:ಜಿಪಿಆರ್.

## K.O.S. SUPPLLIMENTARY EXAMINATION RESULTS

**Bangalore, July 13, (Karnataka Information)**

**Results of Karnataka Open School KOS Supplimentary Examination conducted by Karnataka Secondary Education Examination Board, Bangalore during June-2015, are sent to all the respective KOS Study Centers to announce the results on 14-07-2015 at 2.00 PM at their respective Centers.**
**babu:gpr.**

## ಜಿಲ್ಲಾ ಹಾಗೂ ಉಪ ವಿಭಾಗೀಯ ಮಟ್ಟದ ಸಮಿತಿ ರಚನೆ

**ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)**

ಸರ್ಕಾರದ ಆದೇಶವು ತಿಳಿಸುವಂತೆ, ಹಣ ಲೇವಾದೇವಿ ಮತ್ತು ಸಾರ್ವಜನಿಕರಿಗೆ ಅದರಲ್ಲೂ ವಿಶೇಷವಾಗಿ ರೈತರಿಗೆ ಅನೌಪಚಾರಿಕ ಸಾಲ ನೀಡುವ ಚಟುವಟಿಕೆಗಳನ್ನು ಈಗಾಗಲೇ ರಚಿಸಲಾಗಿರುವ ಅಧಿನಿಯಮದ ನಿಯಮಗಳ ವ್ಯಾಪ್ತಿಯೊಳಗೆ ಪರಿಶೀಲಿಸಿ ಉಲ್ಲಂಘನೆಯಾದ ಪ್ರಕರಣಗಳಲ್ಲಿ ತಪ್ಪಿತಸ್ಥರ ವಿರುದ್ಧ ನಿಯಮಾನುಸಾರ ಕಟ್ಟುನಿಟ್ಟಾಗಿ ಕ್ರಮ ತೆಗೆದುಕೊಳ್ಳಲು ಜಿಲ್ಲಾ ಹಾಗೂ ಉಪ ವಿಭಾಗೀಯ ಮಟ್ಟದಲ್ಲಿ ಸಮಿತಿಗಳನ್ನು ರಚಿಸಿ ಸರ್ಕಾರವು ಆದೇಶ ಹೊರಡಿಸಿದೆ.

**The Karnataka Moneylenders Act 1961. The Karnataka Pawnbrokers Act 1961. The Chit Funds act 1982, and The Karnataka Prohibition of Charging Exorbitant Interest Act 2004** ಹಾಗೂ ಅದರಡಿ ರಚಿಸಲಾಗಿರುವ ನಿಯಮಗಳನ್ನು ಮತ್ತು ಮತ್ತಿತರ ಸಂಬಂಧಿತ ಕಾನೂನುಗಳನ್ನು ಕಟ್ಟುನಿಟ್ಟಾಗಿ ಪಾಲಿಸುತ್ತಿರುವ ಬಗ್ಗೆ ಉಸ್ತುವಾರಿ ಮಾಡಲು ಈ ಕೆಳಕಂಡಂತೆ ಜಿಲ್ಲಾ ಹಾಗೂ ಉಪವಿಭಾಗಿಯ ಮಟ್ಟದ ಸಮಿತಿಗಳನ್ನು ರಚಿಸಲಾಗಿದೆ.

ಜಿಲ್ಲೆಯ ಜಿಲ್ಲಾಧಿಕಾರಿಗಳು ಅಧ್ಯಕ್ಷರಾಗಿರುವ ಈ ಸಮಿತಿಯಲ್ಲಿ ಜಿಲ್ಲಾ ಆರಕ್ಷಕ ಅಧೀಕ್ಷರು, ಜಿಲ್ಲೆಯ ಎಲ್ಲಾ ಉಪ ವಿಭಾಗಾಧಿಕಾರಿಗಳು, ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ತೋಟಗಾರಿಕೆ ಉಪ ನಿರ್ದೇಶಕರು, ತೋಟಗಾರಿಕೆ ಇಲಾಖೆ, ಉಪ ನಿರ್ದೇಶಕರು, ಪಶುಸಂಗೋಪನೆ ಮತ್ತು ಪಶುವೈದ್ಯಕೀಯ ಸೇವೆಗಳ ಇಲಾಖೆ ಇವರುಗಳು ಸದಸ್ಯರಾಗಿರುತ್ತಾರೆ. ಸಹಕಾರ ಸಂಘಗಳ ಉಪ ನಿಬಂಧಕರು ಸಮಿತಿಯ ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ.

ಉಪ ವಿಭಾಗೀಯ ಮಟ್ಟದ ಸಮಿತಿಯಲ್ಲಿ ಸಂಬಂಧಪಟ್ಟ ಉಪ ವಿಭಾಗದ ಉಪ ವಿಭಾಗಾಧಿಕಾರಿಗಳು ಅಧ್ಯಕ್ಷರಾಗಿರುತ್ತಾರೆ. ಈ ಸಮಿತಿಯಲ್ಲಿ ಆರಕ್ಷಕ ಉಪ ಅಧೀಕ್ಷರು, ತಹಸೀಲ್ದಾರರು, ವೃತ್ತ ಆರಕ್ಷಕ ನಿರೀಕ್ಷಕರು, ಸಹಾಯಕ ಕೃಷಿ ನಿರ್ದೇಶಕರು, ಹಿರಿಯ ಸಹಾಯಕ ತೋಟಗಾರಿಕ ನಿರ್ದೇಶಕರು/ಸಹಾಯಕ ನಿರ್ದೇಶಕರು, ಹಾಗೂ ಉಪವಿಭಾಗದ ಎಲ್ಲಾ ಕಂದಾಯ ನಿರೀಕ್ಷಕರು, ಇವರುಗಳು ಸದಸ್ಯರಾಗಿರುತ್ತಾರೆ. ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಸಹಕಾರ ಇಲಾಖೆ ಇವರು ಸಮಿತಿಯ ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ.

ಈ ಸಮಿತಿಗಳು ಪ್ರತಿ 15 ದಿನಗಳಿಗೊಮ್ಮೆ ನಿಯಮಿತವಾಗಿ ಅಥವಾ ಅವಶ್ಯಕವಿದ್ದಲ್ಲಿ ಆಗಿಂದಾಗ್ಗೆ ಸಭೆ ಸೇರಿ ಹೆಚ್ಚು ಪ್ರಮಾಣದಲ್ಲಿ ಬಡ್ಡಿಯನ್ನು ವಸೂಲಿ ಮಾಡಿ ಸಾರ್ವಜನಿಕರನ್ನು ಹಾಗೂ ರೈತರನ್ನು ಶೋಷಿಸುತ್ತಿರುವುದರ ಬಗ್ಗೆ ಯಾವುದೇ ರೂಪದಲ್ಲಿ ದೂರು ಬಂದಲ್ಲಿ ಅಥವಾ ಸ್ವಯಂ ಪ್ರೇರಿತವಾಗಿ ಅಂತಹ ಪ್ರಕರಣಗಳ ಬಗ್ಗೆ ಅಧಿನಿಯಮಗಳನ್ವಯ ಕ್ರಮ ತೆಗೆದುಕೊಳ್ಳುವುದು.

ಈ ಸಂಬಂಧ ತೆಗೆದುಕೊಂಡಿರುವ ಕ್ರಮದ ವರದಿಯನ್ನು ಪ್ರತಿ 3 ತಿಂಗಳಿಗೊಮ್ಮೆ ಉಪ ವಿಭಾಗಾಧಿಕಾರಿಗಳು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ, ಜಿಲ್ಲಾಧಿಕಾರಿಗಳು ಪ್ರಾದೇಶಿಕ ಆಯುಕ್ತರಿಗೆ, ಪ್ರಾದೇಶಿಕ ಆಯುಕ್ತರು ಅವರ ಅಧೀನದಲ್ಲಿ ಬರುವ ಜಿಲ್ಲೆಗಳಿಗೆ ಸಂಬಂಧಿಸಿದ ವರದಿಯನ್ನು ಕ್ರೋಢೀಕರಿಸಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ಕೊಠಡಿ ಸಂಖ್ಯೆ 306, ಮೂರನೇ ಮಹಡಿ, ವಿಧಾನಸೌಧ, ಬೆಂಗಳೂರು ಇವರಿಗೆ ಸಲ್ಲಿಸುತ್ತಾರೆ.

ಪಲ್ಲವಿ:ಜಿಪಿಆರ್.

## ಕಳೆದೆರಡು ವರ್ಷಗಳಲ್ಲಿ 32,177 ಅಭ್ಯರ್ಥಿಗಳಿಗೆ ಉದ್ಯೋಗಾವಕಾಶ

**ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)**

ಕಳೆದ ಎರಡು ವರ್ಷದಲ್ಲಿ ರಾಜ್ಯದ ಉದ್ಯೋಗ ವಿನಿಮಯ ಕೇಂದ್ರ, ಕರ್ನಾಟಕ ವೃತ್ತಿ ತರಬೇತಿ ಮತ್ತು ಕೌಶಲ್ಯ ಅಭಿವೃದ್ಧಿ ನಿಗಮ ಹಾಗೂ ಉದ್ಯೋಗ ಮೇಳಗಳ ಮೂಲಕ ಒಟ್ಟು 32,177 ಅಭ್ಯರ್ಥಿಗಳಿಗೆ ಉದ್ಯೋಗಾವಕಾಶವನ್ನು ಕಲ್ಪಿಸಲಾಗಿದೆ ಎಂದು ಕಾರ್ಮಿಕ ಸಚಿವ ಶ್ರೀ ಪಿ. ಟಿ. ಪರಮೇಶ್ವರ ನಾಯ್ಕ ಅವರು ತಿಳಿಸಿದ್ದಾರೆ.

ವಿಧಾನಸಭೆ ಸದಸ್ಯ ಶ್ರೀ ಎಂ. ಕೆ ಸೋಮಶೇಖರ್ ಅವರು ಕೇಳಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆಗೆ ಲಿಖಿತ ಉತ್ತರ ನೀಡಿರುವ ಅವರು ರಾಜ್ಯದ ಉದ್ಯೋಗ ವಿನಿಮಯ ಕೇಂದ್ರಗಳಿಂದ 8,588, ಕರ್ನಾಟಕ ವೃತ್ತಿ ತರಬೇತಿ ಮತ್ತು ಕೌಶಲ್ಯ ಅಭಿವೃದ್ಧಿ ನಿಗಮದ ಮಾನವ ಸಂಪನ್ಮೂಲ ಕೇಂದ್ರಗಳಿಂದ 9,632 ಹಾಗೂ ಬೃಹತ್ ಉದ್ಯೋಗ ಮೇಳಗಳ ಮೂಲಕ 13,957 ಅಭ್ಯರ್ಥಿಗಳಿಗೆ ಉದ್ಯೋಗವನ್ನು ಕಲ್ಪಿಸಲಾಗಿದೆ ಎಂಬ ಮಾಹಿತಿಯನ್ನು ನೀಡಿದ್ದಾರೆ.

ಕಳೆದ ಎರಡು ವರ್ಷಗಳಲ್ಲಿ ರಾಜ್ಯದ ಉದ್ಯೋಗ ವಿನಿಮಯ ಕೇಂದ್ರಗಳಿಂದ 74 ಮತ್ತು ಕರ್ನಾಟಕ ವೃತ್ತಿ ತರಬೇತಿ ಮತ್ತು ಕೌಶಲ್ಯ ಅಭಿವೃದ್ಧಿ ನಿಗಮದ ಮಾನವ ಸಂಪನ್ಮೂಲ ಅಭಿವೃದ್ಧಿ ಕೇಂದ್ರಗಳಿಂದ 127 ಮಿನಿ ಉದ್ಯೋಗ ಮೇಳವನ್ನು ಹಾಗೂ 4 ಬೃಹತ್ ಉದ್ಯೋಗ ಮೇಳಗಳನ್ನು ನಡೆಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

ಪೂರ್ಣಿಮ

## ಕೊಳವೆ ಬಾವಿಗಳ ವಿದ್ಯುದ್ಧೀಕರಣಕ್ಕೆ ಅನುದಾನದ ಕೊರತೆ ಇಲ್ಲ

**ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)**

ದೊಡ್ಡಬಳ್ಳಾಪುರ ತಾಲ್ಲೂಕಿನ ರೈತರು ಕೃಷಿ ಚಟುವಟಿಕೆಗಾಗಿ ತಮ್ಮ ಜಮೀನಿನಲ್ಲಿ ಕೊರೆದಿರುವ ಕೊಳವೆ ಬಾವಿಗಳ ವಿದ್ಯುದ್ದೀಕರಣಕ್ಕೆ ಅನುದಾನದ ಕೊರತೆ ಇರುವುದಿಲ್ಲವೆಂದು ಸಣ್ಣ ನೀರಾವರಿ ಸಚಿವ ಶ್ರೀ ಶಿವರಾಜ್ ಎಸ್. ತಂಗಡಗಿ ಅವರು ತಿಳಿಸಿದ್ದಾರೆ.

ವಿಧಾನಸಭಾ ಸದಸ್ಯ ಟಿ. ವೆಂಕಟರಮಣಯ್ಯ ಅವರು ಕೇಳಿರುವ ಪ್ರಶ್ನೆಗೆ ಲಿಖಿತ ಉತ್ತರ ನೀಡಿರುವ ಸಚಿವರು 2013-14 ನೇ ಸಾಲಿಗೆ ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಕೊಳವೆ ಬಾವಿ ಕೊರೆಯಲು ಜಿಲ್ಲಾಧಿಕಾರಿಗಳಿಂದ ಅನುಮತಿ ದೊರೆಯಲು ವಿಳಂಬವಾಗಿದೆ. ಅನುಮತಿ ದೊರೆತ ಕೂಡಲೇ ಕಾಮಗಾರಿಗಳನ್ನು ಪ್ರಾರಂಭಿಸಲಾಗಿದೆ.

ಹಾಗಾಗೀ ನೀರಿನ ಲಭ್ಯತೆ ಇರುವ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಆಯಾ ತಾಲ್ಲೂಕು ಬೆಸ್ಕಾಂ ಸಂಸ್ಥೆಗೆ ಮುಂಗಡ ಠೇವಣಿ ಪಾವತಿಸಿ ಈಗಾಗಲೇ ನೋಂದಣಿ ಮಾಡಲಾಗಿದ್ದು, ಬೆಸ್ಕಾಂ ಅಧಿಕಾರಿಗಳಿಂದ ಅಂದಾಜು ಪಟ್ಟಿ ಅನುಮೋದನೆ ಆದ ಕೂಡಲೇ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗುವುದೆಂದು ಸಚಿವರು ತಿಳಿಸಿದ್ದಾರೆ.

ಪೂರ್ಣಿಮ

## ಕಂದಾಯ ಅದಾಲತ್‌ನಿಂದ 668699 ಪ್ರಕರಣ ಇತ್ಯರ್ಥ

**ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)**

ರಾಜ್ಯಾದ್ಯಂತ 2013-14 ನೇ ಸಾಲಿನಿಂದ ಪ್ರಸಕ್ತ ಸಾಲಿನ ಮಾರ್ಚ್ 31 ರವರೆಗೆ ಒಟ್ಟು 668699 ಪ್ರಕರಣಗಳನ್ನು ಕಂದಾಯ ಅದಾಲತ್ ಮೂಲಕ ಇತ್ಯರ್ಥಪಡಿಸಲಾಗಿದೆ ಎಂದು ಕಂದಾಯ ಸಚಿವ ವಿ. ಶ್ರೀನಿವಾಸ ಪ್ರಸಾದ್ ಅವರು ತಿಳಿಸಿದ್ದಾರೆ.

ಈ ಅವಧಿಯಲ್ಲಿ 7833 ಕಂದಾಯ ಅದಾಲತ್‌ಗಳನ್ನು ನಡೆಸುವ ಮೂಲಕ 960079 ಅರ್ಜಿಗಳನ್ನು ಸ್ವೀಕರಿಸಿ ಅವುಗಳಲ್ಲಿ 668699 ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗಿದೆ ಎಂದು ಸಚಿವರು ಸದಸ್ಯ ಕೆ. ಜಿ. ಬೋಪಯ್ಯ ಅವರು ಕೇಳಿರುವ ಪ್ರಶ್ನೆಗೆ ಲಿಖಿತ ಉತ್ತರದ ಮೂಲಕ ಮಾಹಿತಿ ನೀಡಿದ್ದಾರೆ.

ಪೂರ್ಣಿಮ